1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:220/2023

ಪಿರ್ಯಾದಿ : ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿ : ಪ್ರಮೀಳ ಬಿನ್ ಶಿವು 45 ವರ್ಷ
ವಾಸ:ನಗರ್ಲೆ ಗ್ರಾಮ, ನಂಜನಗೂಡು ತಾ.

## ದೋಷಾರೋಪಣೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1* ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ: 23.11.2022 ರಂದು 13.40 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ನಗರ್ಲೆ ಗ್ರಾಮದಲ್ಲಿ ಚಾಸಾ.1 ರವರು ನಗರ್ಲೆ ಗ್ರಾಮದ 5 ನೇ ಅಂಗನವಾಡಿ ಕೇಂದ್ರದಲ್ಲಿ ಅಂಗನವಾಡಿ ಸಹಾಯಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಆರೋಪಿಯಾದ ನೀವು ಹಳೆಯ ದ್ವೇಷದಿಂದ ಏಕಾಏಕಿ ಅಂಗನವಾಡಿ ಕೇಂದ್ರಕ್ಕೆ ನುಗ್ಗಿ ಚಾಸಾ.2 ರವರಿಗೆ ನಿನ್ನ ಸಹಾಯಕಿ ಗೌರಮ್ಮಳಿಗೆ ಸರಿಯಾಗಿ ಬುದ್ದಿ ಕಲಿಸು ಇಲ್ಲವೆಂದರೆ ನಾನು ನಿನ್ನನ್ನು ಮಾತ್ರ ಸುಮ್ಮನೆ ಬಿಡುವುದಿಲ್ಲವೆಂದು ಹೇಳಿ ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.506 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೇಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ದೊಣ್ಣೆಯಿಂದ ಚಾಸಾ.1 ರವರಿಗೆ ಕೈಯಿಂದ ಎಡಕೆನ್ನೆಗೆ ಹೊಡೆದು ತಳ್ಳಿ ಗ್ಯಾಸ್ ಸ್ಟವ್ ಮೇಲೆ ಬೀಳಿಸಿ ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸರ್ಕಾರಿ ನೌಕರರಾದ ಚಾಸಾ.1 ರವರು ತಮ್ಮ ಕರ್ತವ್ಯದಲ್ಲಿದ್ದಾಗ ಅವರ ಮೇಲೆ ಹಲ್ಲೆ

ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.332 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ.1 ರವರಿಗೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.504 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ.1 ರವರಿಗೆ ತಮ್ಮ ಸರ್ಕಾರಿ ಕೆಲಸವನ್ನು ನಿರ್ವಹಿಸದಂತೆ ತಡೆದು ಅವರ ಸರ್ಕಾರಿ ಕೆಲಸಕ್ಕೆ ಅಡ್ಡಿ ಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.353 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 25.06.2025 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಖ್ಯೆ:220/2023**

**ಪಿರ್ಯಾದಿ** : ಬಿಳಿಗೆರೆ ಪೊಲೀಸರು

**ವಿರುದ್ಧ**

**ಆರೋಪಿ** : ಪ್ರಮೀಳ ಬಿನ್ ಶಿವು 45 ವರ್ಷ
ವಾಸ:ನಗರ್ಲೆ ಗ್ರಾಮ, ನಂಜನಗೂಡು ತಾ.

: ಆಪಾದನೆ :

ಪ್ರಶ್ನೆ-1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ :

ಪ್ರಶ್ನೆ-2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**